# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು-32

ಸಂಖ್ಯೆ: ಸ.ಅ/ವಾ-21/ಪಿ.ಆರ್/13/2021-22 ದಿನಾಂಕ:22-04-2021

**::ವಾರ್ಡ್ ಸಮಿತಿ ಸಭೆಯ ನಡವಳಿಗಳು::**

ವಿಷಯ: ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 17-04-2021 ರಂದು ವಾರ್ಡ್ ನಂ:21 ಹೆಬ್ಬಾಳದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

**:: ಸಭೆಗೆ ಹಾಜರಾಗಿದ್ದವರ ವಿವರಗಳು ::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಂ.ವೆಂಕಟಾಚಲಪತಿ (ಜಂಟಿ ಆಯುಕ್ತರು ಕಂದಾಯ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಮುಕೇಶ್.ಎಸ್.ಬಿರಾದಾರ್ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ನಂ. 21 |
| 3. | ಶ್ರೀ. ಮಂಜುನಾಥ್ . | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) |
| 4. | ಶ್ರೀ. ನತರಾಜ್ | ಕಾಂದಾಯ ಪರಿವೀಕ್ಷಕರು |
| 5. | ಶ್ರೀ ರಾಮಣ್ಣ | ತೆರಿಗೆ ನಿರೀಕ್ಷಕರು. |
| 6. | ಶ್ರೀಮತಿ ರಾಧಾ | ಕಿರಿಯ ಅಭಿಯಂತರರು (ಬೆಸ್ಕಾಂ). |
| 7. | ಶ್ರೀ. ಆನಂದ್.ಪಿ.ಸಿ | ಕಿರಿಯ ಅಭಿಯಂತರರು (ಬೀದಿ ದೀಪ ವಿಭಾಗ). |
| 8. | ಶ್ರೀ. ಸ್ವಾಮಿ | ವಾಟರ್ ಮ್ಯಾನ್ (BWSSB) |
| 9. | ಶ್ರೀ. ಪ್ರಕಾಶ್ ಎಂ.ಎನ್ | ಕಾರ್ಯದರ್ಶಿಗಳು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ |
| 10. | ಶ್ರೀ. ವೀರ ಶೇಖರ್ | ಕಾರ್ಯದರ್ಶಿ, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, |
| 11. | ಶ್ರೀ. ಗೋಪಿನಾಥ್ ರಾವ್ | ಸ್ಥಳೀಯ ನಿವಾಸಿಗಳು |
| 12. | ಶ್ರೀಮತಿ ಆರತಿ ಶಂಕರ್ | ಅನಂದನಗರ ವೆಲ್‌ಫೇರ್ ಅಸೋಸಿಯೇಷನ್. |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ, ಶ್ರೀ. ಎಂ. ವೆಂಕಟಾಚಲಪತಿ ಮತ್ತು ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಮುಕೇಶ್. ಎಸ್. ಬಿರಾದಾರ್ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

- ದಿನಾಂಕ : 03-04-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.
- **ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ:**
  1. ವಾರ್ಡ್ ವ್ಯಾಪ್ತಿಯಲ್ಲಿನ ಬ್ಲಾಕ್‌ಸ್ಪಾಟ್‌ಗಳನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ರವರಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು
  2. ವಾರ್ಡ್ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಮಾಡುತ್ತಿರುವ ಆಟೋ ಟಿಪ್ಪರ್ ವಾಹನಗಳಿಗೆ ಮೈಕ್ ಅಳವಡಿಸಿ ಕಸ ವಿಲೇವಾರಿ ಬಗ್ಗೆ ಪ್ರಚಾರ ಮಾಡುವಂತೆ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳಿಗೆ ಸೂಚಿಸಲಾಯಿತು.
  3. ವಾರ್ಡ್ ವ್ಯಾಪ್ತಿಯಲ್ಲಿನ ಉದ್ಯಾನವನಗಳನ್ನು ವಾರಕ್ಕೆ ಎರಡು ಬಾರಿ ಸ್ವಚ್ಛಗೊಳಿಸುವಂತೆ ಸೂಚಿಸಲಾಯಿತು.

4. ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹಣೆ ಮಾಡುವ ಘನತ್ಯಾಜ್ಯ ವಸ್ತುಗಳನ್ನು ಮೂಲದಿಮದಲೇ ಅಂದರೆ ಮನೆ, ಮನೆಯಿಂದ ಸಂಗ್ರಹಣೆ ಮಾಡುವ ಸಂದರ್ಭದಲ್ಲೇ ತ್ಯಾಜ್ಯವನ್ನು ಹಸಿ ಮತ್ತು ಒಣ ಕಸವನ್ನಾಗಿ ಬೇರ್ಪಡಿಸಿ ಸಾಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

- **ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ:**
  1. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ರ ಲಸಿಕೆಯನ್ನು ವಾರ್ಡಿನ ಸಾರ್ವಜನಿಕರು ಹಾಗೂ ಅಧಿಕಾರಿ ನೌಕರರುಗಳಿಗೆ ಕಡ್ಡಾಯವಾಗಿ ತೆಗೆದುಕೊಳ್ಳಲು ಸೂಚಿಸಿರುತ್ತಾರೆ.
  2. ವಾರ್ಡ್ ವ್ಯಾಪ್ತಿಯಲ್ಲಿ ಅನಾರೋಗ್ಯದಿಂದ ಬಳಲುತ್ತಿರುವ ಸಾರ್ವಜನಿಕರುಗಳು ಕಡ್ಡಾಯವಾಗಿ ಕೋವಿಡ್-19 ರ್‍ಯಾಪಿಡ್ ಟೆಸ್ಟ್‌ನ್ನು ಮಾಡಿಕೊಳ್ಳು ಸೂಚಿಸಲಾಗಿರುತ್ತದೆ ಹಾಗೂ ಅನಾವಶ್ಯಕವಾಗಿ ಹೊರಬರಬಾದೆಂದು ಸಾರ್ವಜನಿಕರಲ್ಲಿ ಮನವಿಮಾಡಲಯಿತು.

- **ಕಾಮಗಾರಿ ಇಲಾಖೆಗೆ.**
  1. ವಾರ್ಡ್ ವ್ಯಾಪ್ತಿಯಲ್ಲಿ ಬರುವ 1ನೇ ಅಡ್ಡ ರಸ್ತೆ, ಎಂ.ಎಸ್.ಹೆಚ್.ಬಡಾವಣೆಯ ರಸ್ತೆಯನ್ನು ದುರಸ್ತಿಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
  2. ವಾರ್ಡ್ ನ 4ನೇ ಮುಖ್ಯರಸ್ತೆಯಲ್ಲಿ ಬಾಕಿ ಉಳಿದಿರುವ ಕಲ್ವರ್ಟ್‌ಗಳನ್ನು ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

- **ಕಂದಾಯ ಇಳಾಖೆ:**
  1. ಸಂಬಂಧಪಟ್ಟ ವಾರ್ಡ್ ಪ್ರದೇಶಗಳಲ್ಲಿ ಕಂದಾಯ ತೆರಿಗೆಗಳನ್ನು ವಸೂಲಿ ಮಾಡಲು ಸೂಚಿಸಲಾಯಿತು.

- **ತೋಟಗಾರಿಕೆ ಇಲಾಖೆ:**
  1. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ಚಾಚಿಕೊಂಡಿರುವ ಮರದ ಕೊಂಬೆಗಳನ್ನು ತೆರವುಗೊಳಿಸುವಂತೆ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.
  2. ವಾರ್ಡ್ ವ್ಯಾಪ್ತಿಯಲ್ಲಿರುವ ಉದ್ಯಾನವನಗಳನ್ನು ನಿರ್ವಹಣೆ ಮಾಡಲು ಸೂಚಿಸಲಾಯಿತು.

- **ಬೆಸ್ಕಾಂ ವಿಭಾಗದವರಿಗೆ:**
  1. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್‌ನ್ನು ಸಮಯಕ್ಕೆ ಸರಿಯಾಗಿ ಸರಬರಾಜು ಮಾಡುವಂತೆ ಸೂಚಿಸಲಾಯಿತು.
  2. ವಾರ್ಡ್ ವ್ಯಾಪ್ತಿಯಲ್ಲಿರುವ ವಿಧ್ಯುತ್ ಕಂಬಗಳ ಚೇಬಲ್ ಗಳಿಗೆ ಚಾಚಿಕೊಂಡಿರುವ ಮರದ ಕೊಂಬೆಗಳನ್ನು ತೆರೆವುಗೊಳಿಸುವಂತೆ ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಾರ್ಯದರ್ಶಿಗಳು**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ: 21, ಹೆಬ್ಬಾಳ**

**ಅಧ್ಯಕ್ಷರು**
**ಹಾಗೂ ನೋಡಲ್ ಅಧಿಕಾರಿಗಳು**
**ವಾರ್ಡ್ ನಂ: 21, ಹೆಬ್ಬಾಳ**

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
07. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
09. ಕಛೇರಿ ಕಡತಕ್ಕೆ.